# ಕನ್ನಡ ಪೋಸ್ಟ್

KANNADA POST

ಸಂಪಾದಕ : ಮಂಜು ಬನವಾಸೆ

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 13 | Pages. 2 | Date: 07-12-2025, SUNDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 13 - ಪುಟಗಳು : 2 | 07-12-2025 | ಭಾನುವಾರ | Ph: 8762954248 | ದರ : ₹1


# ಸಮರ್ಪಣಾ ಸಮಾವೇಶದಲ್ಲಿ ಜನ ಸಾಗರ









ಹಾಸನ: ನಗರದಲ್ಲಿ ಶನಿವಾರ ಆಯೋಜಿಸಿದ್ದ ನಡೆದ ಸರ್ಕಾರಿ ಸವಲತ್ತುಗಳ ಸಮರ್ಪಣಾ ಸಮಾರಂಭಕ್ಕೆ ಜನಸಾಗರವೇ ಹರಿದು ಬಂದಿತ್ತು. ಜಿಲ್ಲೆಯ ವಿವಿಧೆಡೆಗಳಿಂದ ಹೆಚ್ಚಾಗಿ ಮಹಿಳೆಯೇ ಆಗಮಿಸಿದ್ದರು.

ಜನರು, ಗಣ್ಯರನ್ನು ಸ್ವಾಗತಿಸಲು ನಗರದ ತುಂಬೆಲ್ಲ ಫ್ಲೆಕ್ಸ್ ರಾರಾಜಿಸುತ್ತಿದ್ದವು. ಆರಂಭದಲ್ಲಿ ಪ್ರಾಸ್ತಾವಿಕ ನುಡಿಗಳನ್ನಾಡಿದ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ, ಈ ಕಾರ್ಯಕ್ರಮ ಯಶಸ್ವಿಗೆ ಶಾಸಕರು, ಸಂಸದರು, ಅಧಿಕಾರಿಗಳು ಸೇರಿ ಎಲ್ಲರೂ ಸಹಕಾರ ಕೊಟ್ಟಿದ್ದಾರೆ. ಇದಕ್ಕಾಗಿ ಎಲ್ಲರಿಗೂ ಧನ್ಯವಾದ ಹೇಳಿದರು.

ಪಕ್ಷ ಬೇಧ ಮರೆತು ಜನ ಸರೋವರದ ರೀತಿಯಲ್ಲಿ ಹರಿದು ಬಂದಿದ್ದೀರಾ, ಇದು ನನ್ನ ಪುಣ್ಯ ಎಂದರು. ಹಿಮ್ಸ್ ಗೆ 55 ಕೋಟಿ, ಸಮಾಜ ಕಲ್ಯಾಣ ಇಲಾಖೆಯ 30 ಕೋಟಿ, ಲೋಕೋಪಯೋಗಿ ಇಲಾಖೆಯ ಹತ್ತಾರು ಕೋಟಿ ಸೇರಿ 298 ಕೋಟಿ ಯೋಜನೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಮಾಡಲಾಗುತ್ತಿದೆ. ಕೆಲವೇ ದಿನಗಳಲ್ಲಿ ನಗರದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾರ್ಯಾರಂಭ ಮಾಡಲಿದೆ ಎಂದು ಭರವಸೆ ನೀಡಿದರು.


ಜಿಲ್ಲೆಯ ಅಭಿವೃದ್ಧಿಗೆ ನಮ್ಮ ಸರ್ಕಾರ ಕಟಿಬದ್ಧವಾಗಿದೆ. ಗ್ಯಾರಂಟಿ ಯೋಜನೆಯಡಿ ಹಾಸನಕ್ಕೂ ಸಾವಿರಾರು ಕೋಟಿ ಕೊಟ್ಟಿದ್ದೇವೆ. 94ಸಿ ಅಡಿಯಲ್ಲಿ ಸಾವಿರಾರು ಮಂದಿಗೆ ಹಕ್ಕು ಪತ್ರ ನೀಡಲಾಗುತ್ತಿದೆ. ಹಲವು ಇಲಾಖೆಗಳ ಅಡಿಯಲ್ಲಿ ದರಕಾಸ್ತು, ಪೋಡಿ ದುರಸ್ತಿ ಅಭಿಯಾನ ಮಾಡಿ ಬಡವರಿಗೆ ಅನುಕೂಲ ಮಾಡಿದ್ದೇವೆ ಎಂದರು.

ರೈತರು ಅರ್ಜಿ ಹಾಕದೇ ಹೋದರೂ ದುರಸ್ತಿ ಮಾಡಿಕೊಡುತ್ತಿದ್ದೇವೆ ಎಂದರು. 1926 ರಿಂದ ದುರಸ್ತಿ ಆಗದೇ ಇದ್ದ ಪ್ರಕರಣ ಇತ್ಯರ್ಥ ಮಾಡಿದ್ದೇವೆ ಎಂದು ವಿವರಿಸಿದರು.

ಶ್ರವಣಬೆಳಗೊಳ ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ತಮ್ಮ ಕ್ಷೇತ್ರದ ಏತ ನೀರಾವರಿ ಯೋಜನೆಗೆ 74 ಕೋಟಿ, ಇಂದಿರಾಗಂಧಿ ಮೊರಾರ್ಜಿ ವಸತಿ ಶಾಲೆಗೆ 22 ಕೋಟಿ ಅನುದಾನ ನೀಡಿದ ಸಿಎಂ-ಡಿಸಿಎಂಗೆ ಧನ್ಯವಾದ ಹೇಳಿದರು.

ಹಾಗೆಯೇ ಚನ್ನರಾಯಪಟ್ಟಣ- ಮೈಸೂರು ಕೆಶಿಪ್ ರಸ್ತೆ ಕಾಮಗಾರಿ ಆರಂಭಕ್ಕೆ ಶೀಘ್ರ ಚಾಲನೆ ನೀಡಿ ಎಂದು ಸತೀಶ್ ಜಾರಕಿಹೊಳಿಗೆ ಮನವಿ ಮಾಡಿದರು. ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ಸಹಕಾರ ಕೊಡಿ ಎಂದ ಅವರು, ಹಾಸನ ಮಹಾನಗರ ಪಾಲಿಕೆಗೆ ಹಣ ನೀಡುವಂತೆ ವಿನಂತಿಸಿದರು. ಪೋಡಿ ದುರಸ್ತಿ ಅಭಿಯಾನದಿಂದ ರೈತರಿಗೆ ತುಂಬಾ ಅತ್ಯಾವಶ್ಯಕವಾಗಿದೆ ಎಂದು ಹೇಳಿದರು.

ಸಕಲೇಶಪುರ ಶಾಸಕ ಸಿಮೆಂಟ್ ಮಂಜು ಮಾತನಾಡಿ, ಎಲ್ಲ ಸಮಸ್ಯೆ ಆಲಿಸುವ, ಸ್ಪಂದಿಸುವ ಉಸ್ತುವಾರಿ ಸಚಿವರ ಕಾರ್ಯವೈಖರಿಯನ್ನು ಗುಣಗಾನ ಮಾಡಿ, ಕೊಂಡಾಡಿದರು.



## ಸಿಎಂ-ಡಿಸಿಎಂಗೆ ಮನವಿ

ಹಾಸನ ವಿಮಾನ ನಿಲ್ದಾಣ ಕಾಮಗಾರಿ ಅನುದಾನವಿಲ್ಲದೆ ನೆನೆಗುದಿಗೆ ಬಿದ್ದಿದೆ. ಪೂರ್ಣಗೊಳಿಸಲು ಅನುದಾನ ನೀಡಬೇಕು. ಜಿಲ್ಲೆಯಲ್ಲಿ ನಾಲೆ, ಉಪನಾಲೆಗಳ ಆಧುನೀಕರಣಕ್ಕೆ ಒತ್ತು ನೀಡಬೇಕು. ಹೇಮಾವತಿ ಜಲಾಶಯ ಬಳಿ ಬೃಂದಾವನ ಮಾದರಿ ಉದ್ಯಾನವನ ನಿರ್ಮಾಣ ಮಾಡಬೇಕು.


ಹಾಸನ ಮಹಾನಗರಪಾಲಿಕೆಗೆ ಅನುದಾನ, ಮಾನವ-ಪ್ರಾಣಿ ಸಂಘರ್ಷ ತಪ್ಪಿಸಿ, ಜಿಲ್ಲೆಯವರೇ ಮಂತ್ರಿಯಾಗಬೇಕು ಎಂಬ ಕೂಗನ್ನು ನಿವಾರಿಸಿ ಎಂದು ಸಿಎಂ-ಡಿಸಿಎಂಗೆ ಸಚಿವರು ವೇದಿಕೆಯಲ್ಲೇ ಮನವಿ ಮಾಡಿದರು.

ಹಳೆಯ ಕಾಲದ ನಾಲುವೆ ರಿಪೇರಿ ಮಾಡಿ, ಮಳೆಯಿಂದ ಹಾನಿಯಾಗಿರುವ ಕಾಫಿ, ಏಲಕ್ಕಿ, ಶುಂಠಿ, ಅಡಕೆ ಮೊದಲಾದ ಬೆಳೆಗಳಿಗೆ ಸೂಕ್ತ ಪರಿಹಾರ ನೀಡಿ ಎಂದು ವಿನಂತಿಸಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಅಲ್ಪಸಂಖ್ಯಾತ ಕಲ್ಯಾಣ ಹಾಗೂ ವಸತಿ ಸಚಿವ ಜಮೀರ್ ಅಹಮದ್, ಸಂಸದ ಶ್ರೇಯಸ್ ಎಂ.ಪಟೇಲ್, ಹುಡಾ ಅಧ್ಯಕ್ಷ ಪಟೇಲ್ ಶಿವಣ್ಣ, ಉಸ್ತುವಾರಿ ಕಾರ್ಯದರ್ಶಿ ನವೀನ್‌ರಾಜ್ ಸಿಂಗ್, ಮೈಸೂರು ಪ್ರಾದೇಶಿಕ ಆಯುಕ್ತ ನಿತೇಶ್ ಪಟೇಲ್, ಐಎಎಸ್ ಅಧಿಕಾರಿ ಸಿ.ಸತ್ಯಭಾಮ, ಎಸ್ಪಿ ಮೊಹಮದ್ ಸುಜೀತಾ, ಜಿಪಂ ಸಿಇಒ ಬಿ.ಆರ್.ಪೂರ್ಣಿಮಾ, ಕೆಡಿಪಿ ಸದಸ್ಯ ಎಂ.ಎ.ಗೋಪಾಲಸ್ವಾಮಿ ಹಾಗೂ ಪರಾಜಿತ ಅಭ್ಯರ್ಥಿಗಳು ಹಾಗೂ ವಿವಿಧ ಇಲಾಖೆ ಅಧಿಕಾರಿಗಳಿದ್ದರು. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

ಇದಕ್ಕೂ ಮುನ್ನ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಎಲ್ಲರನ್ನೂ ಸ್ವಾಗತಿಸಿದರು. ಬೇಲೂರು ಶಾಸಕ ಹೆಚ್.ಕೆ.ಸುರೇಶ್ ವಂದಿಸಿದರು.





## ಹೇಮಾವತಿ ಜಲಾಶಯದ ಎದುರು ಬೃಂದಾವನ ಮಾದರಿ ಉದ್ಯಾನ: ಸಿಎಂ ಭರವಸೆ



ಹಾಸನ : ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಒಂದು ವರ್ಷದೊಳಗೆ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದು, ಕರ್ನಾಟಕದ ಇತಿಹಾಸದಲ್ಲಿಯೇ ಕಾಂಗ್ರೆಸ್ ಸರ್ಕಾರ ಮಾತ್ರ ಕೊಟ್ಟ ಮಾತಿನಂತೆ ನಡೆದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಹಾಸನದಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಹಾಸನ ವತಿಯಿಂದ ಆಯೋಜಿಸಲಾದ ಸರ್ಕಾರದ ಸೇವೆಗಳ ಸಮರ್ಪಣಾ ಸಮಾವೇಶದಲ್ಲಿ ವಿವಿಧ ಇಲಾಖೆಗಳ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಿ, ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಿದ ನಂತರ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು.

ಇಂದು ಸುಮಾರು 298 ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆಯನ್ನು ನೆರವೇರಿಸಲಾಗಿದೆ. ಹಾಸನ ಜಿಲ್ಲೆಯ ರಾಜಕೀಯ ಚಿತ್ರಣ ಮತ್ತು ಇಲ್ಲಿನ ಸಮಸ್ಯೆಗಳ ಬಗ್ಗೆ ಸ್ಪಷ್ಟವಾದ ಅರಿವಿದೆ. ಈ ಸಮಸ್ಯೆಗಳಿಗೆ ಸೂಕ್ತ ರೀತಿಯಲ್ಲಿ ಪರಿಹಾರ ನೀಡುವ ಕೆಲಸವನ್ನು ಸರ್ಕಾರ ಸಮರ್ಪಕವಾಗಿ ನಿರ್ವಹಿಸಿದೆ. ಕಾಂಗ್ರೆಸ್ ಪಕ್ಷ ಚುನಾವಣಾ ಪೂರ್ವದಲ್ಲಿ 492 ಭರವಸೆಗಳನ್ನು ನೀಡಿದ್ದು, ಅದರಂತೆ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಎರಡೂವರೆ ವರ್ಷದಲ್ಲಿ 242 ಭರವಸೆಗಳನ್ನು ಈಡೇರಿಸಲಾಗಿದೆ. 2013 ರಿಂದ 2018 ರವರೆಗೆ ಹಾಗೂ 2023 ರಿಂದ ಇಲ್ಲಿಯವರೆಗಿನ ನಮ್ಮ ಅವಧಿಯಲ್ಲಿ ಕಾಂಗ್ರೆಸ್ ಸರ್ಕಾರ ನೀಡಿದ ಎಲ್ಲ ಭರವಸೆಗಳನ್ನು ನೀಡುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. 2013-2018ರಲ್ಲಿ ನೀಡಲಾಗಿದ್ದ 162 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದ್ದೇವೆ. 2023 ರ ಮೇ ತಿಂಗಳಲ್ಲಿ ಅಧಿಕಾರಕ್ಕೆ ಬಂದ ತಕ್ಷ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲು ಪ್ರಯತ್ನಿಸಲಾಯಿತು. ಈ ಪ್ರಯತ್ನದ ಫಲವಾಗಿ ಜೂನ್ ತಿಂಗಳಲ್ಲಿ ಶಕ್ತಿ ಯೋಜನೆಯನ್ನು ಜಾರಿಗೆ ತಂದಿದ್ದು, ಇದುವರೆಗೂ ಸುಮಾರು 600 ಕೋಟಿಗೂ ಹೆಚ್ಚು ಮಹಿಳೆಯರು ಉಚಿತ ಬಸ್ ಸೇವೆ ಪಡೆದಿದ್ದಾರೆ ಎಂದರು.

ಹೇಮಾವತಿ ಜಲಾಶಯದ ಬಳಿ ಉದ್ಯಾನವನ ನಿರ್ಮಿಸಲು ಸಿಎಂ ಭರವಸೆ

ಹಾಸನ ಜಿಲ್ಲೆಯ ಹೇಮಾವತಿ ಜಲಾಶಯದ ಬಳಿ 700 ಎಕರೆ ಜಾಗವಿದ್ದು, ಅಲ್ಲಿ ಪ್ರವಾಸೋದ್ಯಮದ ಪ್ರೋತ್ಸಾಹಕ್ಕೆ ಉದ್ಯಾನವನ ನಿರ್ಮಾಣಕ್ಕೆ ಜಿಲ್ಲಾ ಉಸ್ತುವಾರಿಸಚಿವರಾದ ಕೃಷ್ಣ ಬೈರೇಗೌಡರವರು ಕೋರಿದ ಸಲ್ಲಿಸಿದ್ದು, ಈ ಬಗ್ಗೆ ಪರಿಶೀಲಿಸಿ ತೀರ್ಮಾನ ಕೈಗೊಳ್ಳುವ ಭರವಸೆಯನ್ನು ನೀಡಿ ಮುಖ್ಯಮಂತ್ರಿಗಳು ನೀಡಿದರು. ಕರ್ನಾಟಕದ ಇತಿಹಾಸದಲ್ಲಿ ಕಾಂಗ್ರೆಸ್ ಸರ್ಕಾರ ಮಾತ್ರವೇ ಕೊಟ್ಟ ಮಾತಿನಂತೆ ನಡೆದಿದೆ ಎಂದರು.

### ಗ್ಯಾರಂಟಿಗಳ ಯಶಸ್ವಿ ಜಾರಿ

ಗ್ಯಾರಂಟಿ ಯೋಜನೆಗಳನ್ನು ಜಾರಿಯಾಗಿಸಲು ಸಾಧ್ಯವಿಲ್ಲ ಎಂದು ವಿಪಕ್ಷಗಳು ದೂರಿದವು. ಆದರೆ ಒಂದು ವರ್ಷದೊಳಗೆ ಎಲ್ಲ ಗ್ಯಾರಂಟಿ ಯೋಜನೆಗಳನ್ನು ನಮ್ಮ ಸರ್ಕಾರ ಯಶಸ್ವಿಯಾಗಿ ಜಾರಿಗೊಳಿಸಿದ್ದು, ಇದುವರೆಗೆ 108135 ಕೋಟಿ ರೂಗಳನ್ನು ವೆಚ್ಚ ಮಾಡಿದೆ. ಲೋಕಸಭೆ ಚುನಾವಣೆಯ ನಂತರ ಗ್ಯಾರಂಟಿಗಳನ್ನು ನಿಲ್ಲಿಸಲಾಗುವುದು ಎಂದು ಆರೋಪಿಸಿದರು. ಟೀಕೆಗಳು ಸಾಯುತ್ತವೆ ಆದರೆ, ನಮ್ಮ ಜನಪರ ಕಾರ್ಯಗಳು ಸದಾ ಉಳಿಯುತ್ತವೆ ಎಂದರು.

### ಎಲ್ಲರೂ ಮುಖ್ಯವಾಹಿನಿಗೆ ಬರಬೇಕು

ಸಮಸಮಾಜ ನಿರ್ಮಾಣ ಮಾಡಬೇಕು, ಜಾತಿ, ವರ್ಗ ತೊಲಗಿಸಬೇಕು, ಎಲ್ಲರಿಗೂ ಸಮಾನ ಅವಕಾಶಗಳು ಹಾಗೂ ಹಕ್ಕುಗಳನ್ನು ಕೊಡಬೇಕು ಎಂದು ಸಂವಿಧಾನ ಹೇಳುತ್ತದೆ. ಇದಾಗದೇ ಹೋದರೇ ದೇಶಕ್ಕೆ ಸ್ವಾತಂತ್ರ್ಯ ದೊರಕಿರುವುದು ಸಾರ್ಥಕವಾಗುವುದಿಲ್ಲ ಎಂದರು. ರಾಜಕೀಯ ಸ್ವಾತಂತ್ರ್ಯ ಬಂದರೆ ಮಾತ್ರ ಸಾಲದು. ಅದಕ್ಕಾಗಿಯೇ ನಮ್ಮ ಸರ್ಕಾರ 5 ಗ್ಯಾರಂಟಿಗಳನ್ನು ರೂಪಿಸಿದಾಗ ಎಲ್ಲಾ ಜಾತಿ, ಧರ್ಮಗಳ ಜನರಿಗೆ ತಲುಪುವಂತೆ ಮಾಡಿದ್ದೇವೆ. ಎಲ್ಲರೂ ಮುಖ್ಯವಾಹಿನಿಗೆ ಬರದೇ ಹೋದರೆ ಸ್ವಾತಂತ್ರ್ಯ ಬಂದು 79 ವರ್ಷಗಳಾದರೂ ಸಾರ್ಥಕವಾಗುವುದಿಲ್ಲ. ಸಂವಿಧಾನ ಜಾರಿಯಾಗಿ 75 ವರ್ಷಗಳಾದರೂ ಸಮಾನತೆ ಬಂದಿಲ್ಲ. ಶ್ರೀಮಂತರು, ಶ್ರೀಮಂತರಾಗಿಯೇ ಇದ್ದಾರೆ, ಬಡವರು ಬಡವರಾಗಿಯೇ ಉಳಿದಿದ್ದಾರೆ. ಜಾತಿ ವ್ಯವಸ್ಥೆಯ ಕಾರಣದಿಂದ ಸಮಾನತೆ ಬಂದಿಲ್ಲ. ನಮ್ಮ ಸರ್ಕಾರ ಇದನ್ನು ಮನಗಂಡು ಭಾಗ್ಯ ಯೋಜನೆಗಳನ್ನು ಹಾಗೂ ಈಗ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ ಎಂದರು.

### ಗ್ಯಾರಂಟಿಗಳು ವ್ಯರ್ಥ ಎಂದವರಿಗೆ ಜನರೇ ಉತ್ತರ ಕೊಡಬೇಕು

ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಹಣ ಉಳಿತಾಯವಾಗುತ್ತಿದೆ. ಇದನ್ನು ವ್ಯರ್ಥ ಎಂದು ಕೆಲವರು ಟೀಕೆ ಮಾಡುತ್ತಿದ್ದು, ಇದಕ್ಕೆ ಜನರೇ ಉತ್ತರ ಕೊಡಬೇಕು ಎಂದರು. ಒಂದು ಲಕ್ಷ ಕೋಟಿಗೂ ಹೆಚ್ಚು ವೆಚ್ಚವನ್ನು ಗ್ಯಾರಂಟಿಗಳಿಗೆ ಕೊಡಬೇಕಾದರೆ ಸಮಾನತೆಯನ್ನು ತರಬೇಕೆಂಬ ಉದ್ದೇಶದಿಂದಲೇ ಎಂದರು. ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ನೆನೆಸಿಕೊಂಡು ಸಮಾಜದಲ್ಲಿನ ಜಾತೀಯತೆ , ವರ್ಗ ವ್ಯವಸ್ಥೆಯನ್ನು ತೊಡೆದುಹಾಕೋಣ. ನಮ್ಮ ಸರ್ಕಾರ ದಲಿತರು, ರೈತರು, ಮಹಿಳೆಯರು, ಕಾರ್ಮಿಕರ ಪರವಾಗಿರುವ ಸರ್ಕಾರ ಎಂದರು. ಹಾಸನ ಜಿಲ್ಲೆಯಲ್ಲಿ ಅನೇಕ ಅಭಿವೃದ್ಧಿ ಕೆಲಸಗಳಾಗಿವೆ. ಚುನಾವಣೆ ಸಂದರ್ಭದಲ್ಲಿ ಘೋಷಣೆ ಮಾಡಿದ್ದನ್ನು ನಾವು ಜಾರಿ ಮಾಡಿದ್ದೇವೆ ಎಂದರು. ಇಂದು ಉದ್ಘಾಟನೆ ಮತ್ತು ಶಂಕುಸ್ಥಾಪನೆಗೊಂಡ ಯೋಜನೆಗಳು ಜನೋಪಕಾರಿಯಾಗಿವೆ. ಇನ್ನು ಮುಂದೆಯೂ ಹಾಸನ ಜಿಲ್ಲೆಗೆ ವಿಶೇಷ ಗಮನವನ್ನು ನೀಡಲಾಗುತ್ತದೆ ಎಂದರು.

## ಅಹಿಂದ ವರ್ಗಗಳ ಸಂಘಟನೆಯಲ್ಲಿ ನನ್ನ ಕೊಡುಗೆಯಿದೆ: ಸಿಎಂ ಸಿದ್ದರಾಮಯ್ಯ

# ಮಂಡ್ಯಕ್ಕೆ ಕುಮಾರಸ್ವಾಮಿಯವರ ಕೊಡುಗೆಗಳೇನು : ಸಿಎಂ ಪ್ರಶ್ನೆ


ಹಾಸನ, ಡಿಸೆಂಬರ್ 6: ಅಹಿಂದ ವರ್ಗಗಳ ಸಂಘಟನೆಯಲ್ಲಿ ನನ್ನ ಕೊಡುಗೆಯಿದೆ, ಮಂಡ್ಯಕ್ಕೆ ಕುಮಾರಸ್ವಾಮಿಯವರ ಕೊಡುಗೆಗಳೇನು ಎಂದು ಅವರು ಸ್ಪಷ್ಟಪಡಿಸಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಹಾಸನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಅಹಿಂದ ವರ್ಗಕ್ಕೆ ಸಿದ್ದರಾಮಯ್ಯನವರ ಕೊಡುಗೆಯ ಬಗ್ಗೆ ಪ್ರಶ್ನೆ ಮಾಡಿರುವ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರ ಹೇಳಿಕೆಗೆ ಪ್ರತಿಕ್ರಿಯೆ ನೀಡುತ್ತಾ, ಅಹಿಂದ ವರ್ಗಗಳ ಸಂಘಟನೆಯಲ್ಲಿ ನಾನು ಪ್ರಮುಖ ಪಾತ್ರ ವಹಿಸಿದ್ದು, ಅವರಿಗೆ ಗ್ಯಾರಂಟಿ ಹಾಗೂ ಅನೇಕ ಭಾಗ್ಯಯೋಜನೆಗಳನ್ನು ನೀಡಿದ್ದೇವೆ. ಕಾರ್ಮಿಕರು, ಬಡವರು, ದಲಿತರು, ಅಲ್ಪಸಂಖ್ಯಾತರು, ಮಹಿಳೆಯರ ಸಬಲೀಕರಣಕ್ಕೆ ಗ್ಯಾರಂಟಿ ಸೇರಿದಂತೆ ಅನೇಕ ಯೋಜನೆಗಳಿಂದ ಅನುಕೂಲವಾಗಿದೆ. ಕುಮಾರಸ್ವಾಮಿಯವರು ರೈತರ ಕುಟುಂಬದವರೇ ಹೊರತು, ರೈತವರ್ಗಕ್ಕೆ ಅವರ ಕೊಡುಗೆಗಳೇನಿದೆ? ಎಂದು ಪ್ರಶ್ನಿಸಿದರು.

### ಜಿಎಸ್ ಟಿ ದರ ಕಡಿತದಿಂದ ರಾಜ್ಯಕ್ಕಾಗಿರುವ ನಷ್ಟ

ಸೆಪ್ಟೆಂಬರ್ ನಿಂದ ನವೆಂಬರ್ 2025ರವೆಗೆ ಕರ್ನಾಟಕಕ್ಕೆ ಜಿಎಸ್ ಟಿ ಸಂಗ್ರಹದಲ್ಲಿ ನಷ್ಟವಾಗಿದೆ. 2017 ರಲ್ಲಿ ಪ್ರಧಾನಿ ಮೋದಿಯವರು ಜಿಎಸ್ ಟಿ ಜಾರಿಗೆ ತಂದು, ಅಂದಿನಿಂದಲೂ ಜನರಿಂದ ತೆರಿಗೆ ವಸೂಲಿ ಮಾಡುತ್ತಿದ್ದಾರೆ. ಈಗ ಆರ್ಥಿಕ ವರ್ಷದ ಮಧ್ಯದಲ್ಲಿಯೇ ಜಿಎಸ್ ಟಿ ದರವನ್ನು ಕಡಿಮೆ ಮಾಡಿದ ಪರಿಣಾಮ, ರಾಜ್ಯ ಸರ್ಕಾರಗಳಿಗೆ ಜಿಎಸ್ ಟಿ ಸಂಗ್ರಹದಲ್ಲಿ ನಷ್ಟವಾಗಿದೆ. ಕೇರಳ, ಮಹಾರಾಷ್ಟ್ರ ಮತ್ತು ಕರ್ನಾಟಕವನ್ನು ಹೊರತುಪಡಿಸಿ, ದೇಶದ ಎಲ್ಲಾ ರಾಜ್ಯಗಳಲ್ಲಿ ಜಿಎಸ್ ಟಿ ಸಂಗ್ರಹದಲ್ಲಿ ಕೊರತೆ ಕಂಡಿದೆ ಎಂದರು.

### ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡದೇ



### ಮಂಡ್ಯ ಜನರಿಗೆ ಅನ್ಯಾಯ

ಜಿಎಸ್ ಟಿ ದರ ಕಡಿತದಿಂದ ರಾಜ್ಯಕ್ಕಾಗಿರುವ ನಷ್ಟದ ಬಗ್ಗೆ ಕೇಂದ್ರ ಸಚಿವ ಕುಮಾರಸ್ವಾಮಿಯರು ಇದುವರೆಗೂ ಧ್ವನಿ ಎತ್ತಿರುವುದಿಲ್ಲ ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆ ಕೇಂದ್ರ ವಿತ್ತಸಚಿವರು 5300 ಕೋಟಿ ಬಜೆಟ್ ನಲ್ಲಿ ಘೋಷಣೆ ಮಾಡಿದ್ದರು. ಈ ಘೋಷಣೆಯಲ್ಲಿ ಹಿಂದಿನ ಸರ್ಕಾರದವರು ತಮ್ಮ ಆಯವ್ಯಯದಲ್ಲಿಯೂ ಉಲ್ಲೇಖಿಸಿದರು. ಆದರೆ ಇದುವರೆಗೆ ಕೇಂದ್ರದಿಂದ ಈ ಅನುದಾನವನ್ನು ಬಿಡುಗಡೆ ಮಾಡಿಲ್ಲ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ, ಕೇಂದ್ರ ಸರ್ಕಾರದ ಅಧೀನದಲ್ಲಿದ್ದು, ರಾಜ್ಯದ ಪ್ರಮುಖ ಯೋಜನೆಗೆ ಇದುವರೆಗೆ ಅನುಮತಿ ದೊರೆತಿಲ್ಲ. ಇದರಿಂದ ಮಂಡ್ಯ ಜನರಿಗೆ ಅನ್ಯಾಯವಾಗಿದೆ ಎಂದರು.

### ಟೀಕೆಗಳು ಸತ್ತುಹೋಗುತ್ತವೆ ಸಾಧನೆಗಳು ಉಳಿಯುತ್ತವೆ

ಟೀಕೆಗಳು ಸತ್ತುಹೋಗುತ್ತವೆ ಸಾಧನೆಗಳು ಉಳಿಯುತ್ತವೆ ಎಂದು ಹೇಳಬೇಕಾಗುತ್ತದೆ ಎಂದರು. ಜಿ.ಎಸ್. ಟಿ ನಲ್ಲಿ ನಮಗೆ ಈ ವರ್ಷ ಸುಮಾರು 12 ಸಾವಿರ ಕೋಟಿ ನಷ್ಟವಾಗಬಹುದೆಂಬ ಅಂದಾಜಿದೆ. 1 ಲಕ್ಷದ 26 ಕೋಟಿ ತೆರಿಗೆ ಬರಲಿದೆ ಎಂದು ಅಂದಾಜು ಮಾಡಿದ್ದೆವು. ಈಗ 12 ಸಾವಿರ ಕೋಟಿ ಅದರಲ್ಲಿ ಕಡಿಮೆಯಾಗಲಿದೆ. 88 ಸಾವಿರ ಕೋಟಿ ತಲುಪಲು ಕಷ್ಟವಾಗಲಿದೆ. ಇದನ್ನು ಏಕೆ ಪ್ರಶ್ನಿಸುವುದಿಲ್ಲ. ಕರ್ನಾಟಕದ ಮಂಡ್ಯದಿಂದ ಸಂಸದರಾಗಿದ್ದಾರಲ್ಲ. ಸಿದ್ದರಾಮಯ್ಯ ಅವರು ಅಹಿಂದಕ್ಕೆ ಏನು ಮಾಡಿದ್ದಾರೆ ಎಂದು ಪ್ರಶ್ನಿಸುತ್ತಾರೆ. ಸಂಸತ್ತಿನಲ್ಲಿ ಎಂದಾದರೂ ಈ ಬಗ್ಗೆ ಮಾತನಾಡಿದ್ದಾರೆಯೇ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಟೀಕೆ ಮಾಡಲೆಂದೇ ಮಾತನಾಡುವುದಲ್ಲ. ನಾವು ಏನು ಮಾಡಿದ್ದೇವೆ ಎಂದು ಹೇಳುತ್ತೇವೆ. ಗ್ಯಾರಂಟಿ ಯೋಜನೆಗಳಿಗೆ 1 ಲಕ್ಷದ 8135 ಕೋಟಿ ವೆಚ್ಚ ಮಾಡಿದ್ದೇವೆ. ಮಧ್ಯವರ್ತಿಗಳಿಲ್ಲದೆ ನೇರವಾಗಿ ಫಲಾನುಭವಿಗಳ ಖಾತೆಗೆ ಜಮಾ ಆಗಿದೆ. ಹಾಕಿಲ್ಲ ಎಂದು ಹೇಳಲಿ ನೋಡೋಣ ಎಂದರು. ಪ್ರಧಾನಿ ನರೇಂದ್ರ ಮೋದಿಯವರು ಗ್ಯಾರಂಟಿಗಳನ್ನು ಜಾರಿ ಮಾಡಲು ಸಾಧ್ಯವಿಲ್ಲ.



ಒಂದು ವೇಳೆ ಜಾರಿ ಮಾಡಿದರೆ ಕರ್ನಾಟಕ ರಾಜ್ಯ ದಿವಾಳಿಯಾಗಲಿದೆ ಎಂದಿದ್ದರು ಎಂದರು.

### ಮಹಿಳಾ ಮೀಸಲಾತಿ ಕೊಡಬೇಕು ಎಂದು ಒತ್ತಾಯಿಸಿಸುವವರಲ್ಲಿ ನಾವು ಮುಂಚೂಣಿಯಲಿದ್ದೇವೆ

ಮಹಿಳಾ ಮೀಸಲಾತಿ ಜಾರಿಯಾಗಿಲ್ಲದಿರುವ ಬಗ್ಗೆ ಸುಪ್ರೀಂ ಕೋರ್ಟ್ ಕಳವಳ ವ್ಯಕ್ತಪಡಿಸಿರುವ ಬಗ್ಗೆ ಮಾತನಾಡಿ ನಮ್ಮ ಸರ್ಕಾರ ಮೊದಲಿನಿಂದಲೂ ಸಂಸತ್ತು ಮತ್ತು ವಿಧಾನಸಭೆಯಲ್ಲಿ ಮಹಿಳಾ ಮೀಸಲಾತಿ ಕೊಡಬೇಕು ಎಂದು ಒತ್ತಾಯಿಸಿಸುವವರಲ್ಲಿ ನಾವು ಮುಂಚೂಣಿಯಲಿದ್ದೇವೆ. ಮೀಸಲಾತಿ ಕೊಡಬೇಕು ಎಂದರೆ ತಕ್ಷಣ ಕೊಡಬೇಕು. ಕೇಂದ್ರ ಸರ್ಕಾರ ಇದನ್ನು ಏಕೆ ಮುಂದೂಡಬೇಕು ಎಂದು ಪ್ರಶ್ನಿಸಿದರು.

### ನಮ್ಮ ಸರ್ಕಾರ ತೆರೆದ ಪುಸ್ತಕ ಇದ್ದಂತೆ

ವಿರೋಧ ಪಕ್ಷಗಳನ್ನು ಅವಿಶ್ವಾಸ ನಿರ್ಣಯ ತರಲಿ, ನಾವು ಎದುರಿಸಲು ತಯಾರಿದ್ದೇವೆ. ನಾವು ತೆರೆದ ಪುಸ್ತಕ ಇದ್ದಂತೆ. ನಮ್ಮದು ಪಾರದರ್ಶಕ ಸರ್ಕಾರ. ಎಲ್ಲವನ್ನು ಎದುರಿಸಲು ತಯಾರಿದ್ದೇವೆ ಎಂದರು.

### ಮಾನವ - ವನ್ಯಜೀವಿ ಸಂಘರ್ಷವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ

ಮಾನವ - ವನ್ಯಜೀವಿ ಸಂಘರ್ಷ ವನ್ನು ನಮ್ಮ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಇದನ್ನು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಸಿದ್ದರಾಮಯ್ಯ ಇಲ್ಲದೇ ಕಾಂಗ್ರೆಸ್ ಇಲ್ಲ ಎಂದು ಮಾಜಿ ಸಚಿವ ಕೆ. ಎನ್. ರಾಜಣ್ಣ ಹೇಳಿಕೆ ನೀಡಿರುವ ಬಗ್ಗೆ ಮಾತನಾಡಿ ಅವರು ಹೇಳಿಕಿದ್ದಕ್ಕೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ ಎಂದರು.

### ಕಾಂಗ್ರೆಸ್ ಕಾರ್ಯಕರ್ತನ ಹತ್ಯೆ : ಕಾನೂನಿನ ಕ್ರಮ

ಚಿಕ್ಕಮಗಳೂರಿನಲ್ಲಿ ಬ್ಯಾನರ್ ಕಟ್ಟುವ ವಿಚಾರಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಕಾರ್ಯಕರ್ತರ ಹತ್ಯೆಯಾಗಿರುವ ಬಗ್ಗೆ ಮಾತನಾಡಿ ಈ ಬಗ್ಗೆ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಲಾಗುವುದು. ಜಿಲ್ಲಾ ರಕ್ಷಣಾಧಿಕಾರಿಗಳೊಂದಿಗೆ ಮಾತನಾಡುತ್ತೇನೆ ಎಂದರು.


### ಹೈ ಕಮಾಂಡ್ ಸೂಚನೆಗೆ ಬದ್ಧ

ನವೆಂಬರ್ ಕ್ರಾಂತಿಯ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ನಮ್ಮ ಪಕ್ಷದ ವರಿಷ್ಠರು ನಿರ್ಧಾರ ಮಾಡಿದಂತೆ ನಡೆದುಕೊಳ್ಳುವುದಾಗಿ ತಿಳಿಸಿದರು.

## ಕೊಟ್ಟ ಮಾತಿನಂತೆ ನಮ್ಮ ಸರ್ಕಾರ 142 ಭರವಸೆಗಳನ್ನು ಈಡೇರಿಸಿದೆ: ಡಿಸಿಎಂ ಡಿ.ಕೆ. ಶಿವಕುಮಾರ್

# ಜನರ ಜೇಬಿಗೆ 1 ಲಕ್ಷ ಕೋಟಿ ರೂ. ಗ್ಯಾರಂಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ : ನಮ್ಮದು ನುಡಿದಂತೆ ನಡೆವ ಸರ್ಕಾರ. ಕೊಟ್ಟ ಮಾತಿನಂತೆ 142 ಭರವಸೆಗಳನ್ನು ಈಗಾಗಲೇ ಈಡೇರಿಸಿದೆ. ನಮ್ಮ ಸರ್ಕಾರದ ಸಾಧನೆಗಳಿಗೆ ಜನರ ಕಣ್ಣುಗಳೇ ಸಾಕ್ಷಿ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಹಾಸನದಲ್ಲಿ ಶನಿವಾರ ನಡೆದ ಸರ್ಕಾರದ ಸೇವೆಗಳ ಸಮರ್ಪಣಾ ಸಮಾವೇಶದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು.

ದೇವರು ವರ ಹಾಗೂ ಶಾಪ ಎರಡನ್ನೂ ನೀಡುವುದಿಲ್ಲ. ಕೇವಲ ಅವಕಾಶ ಮಾತ್ರ ನೀಡುತ್ತಾನೆ. ನಮಗೆ ಸಿಕ್ಕ ಈ ಅವಕಾಶದಲ್ಲಿ ಜನರ ಹೃದಯ ಗೆಲ್ಲಲು ಅನೇಕ ಯೋಜನೆ, ಕಾರ್ಯಕ್ರಮ ರೂಪಿಸಿದ್ದೇವೆ. ಬೆಲೆ ಏರಿಕೆಯಿಂದ ಆರ್ಥಿಕವಾಗಿ ತೊಂದರೆ ಅನುಭವಿಸಿದ್ದ ನಿಮಗೆ ಉಚಿತ ಬಸ್ ಪ್ರಯಾಣ, 200 ಯೂನಿಟ್ ವರೆಗೂ ಉಚಿತ ವಿದ್ಯುತ್, ಬಡ ಮಹಿಳೆಯರ ಖಾತೆಗೆ ಪ್ರತಿ ತಿಂಗಳು 2 ಸಾವಿರ, 10 ಕೆ.ಜಿ ಅಕ್ಕಿ, ನಿರುದ್ಯೋಗಿ ಯುವಕರಿಗೆ ನಿರುದ್ಯೋಗ ಭತ್ಯೆ ನೀಡಲಾಗುತ್ತಿದೆ. ನಾವು ಪಕ್ಷಬೇಧ ಮಾಡದೆ ಯೋಜನೆ ನೀಡುತ್ತಿದ್ದೇವೆ ಎಂದು ವಿವರಿಸಿದರು.

ನಮ್ಮ ಯೋಜನೆಗಳ ಬಗ್ಗೆ ಕೆಲವರು ಟೀಕೆ ಮಾಡುತ್ತಾರೆ. ನಾನು ಅವರಿಗೆ ಉತ್ತರವಾಗಿ ಒಂದು ಉದಾಹರಣೆ ನೀಡುತ್ತೇನೆ. ಅಕ್ಬರ್ ಸತ್ಯಕ್ಕೂ ಸುಳ್ಳಿಗೂ ಇರುವ ಅಂತರವೆಷ್ಟು ಎಂದು ಕೇಳುತ್ತಾನೆ. ಅದಕ್ಕೆ ಬೀರ್ ಬಲ್, ಕೇವಲ ನಾಲ್ಕು ಬೆರಳುಗಳ ಅಂತರ ಸ್ವಾಮಿ, ಈ ಕಣ್ಣಲ್ಲಿ ನೋಡುವುದು ಸತ್ಯ, ಕಿವಿಯಲ್ಲಿ ಕೇಳುವುದು ಸುಳ್ಳು. ಈ ಕಣ್ಣು ಹಾಗೂ ಕಿವಿಯ ಮಧ್ಯೆ ಇರುವುದು ನಾಲ್ಕು ಬೆರಳಿನ ಅಂತರ ಎಂದು ವಿವರಿಸುತ್ತಾರೆ. ಹೀಗಾಗಿ ನಮ್ಮ ಸರ್ಕಾರದ ಕೆಲಸಗಳನ್ನು ಜನರು ಕಣ್ಣಾರೆ ಕಾಣುತ್ತಿದ್ದಾರೆಯೇ ಹೊರತು ಕೇವಲ ಕಿವಿಯಲ್ಲಿ ಕೇಳುತ್ತಿಲ್ಲ ಎಂದು ವಿವರಿಸಿದರು.

ಇದು ಅಭಿವೃದ್ಧಿಯ ಸರ್ಕಾರ. ಸರ್ವರಿಗೂ ಸಮಪಾಲು, ಸಮಬಾಳು, ಸರ್ವರಿಗೂ ನೆಮ್ಮದಿ, ಸರ್ವರಿಗೂ ಅಭಿವೃದ್ಧಿ ನೀಡುವ ಸರ್ಕಾರ ನಮ್ಮದು. ನಾವು ಒಂದು ನಿಮಿಷದಲ್ಲಿ ಬದಲಾವಣೆ ಮಾಡಲು ಸಾಧ್ಯವಿಲ್ಲ. ಆದರೆ ಒಂದು ನಿಮಿಷದಲ್ಲಿ ಜನರ ಅಭಿವೃದ್ಧಿ ಬಗ್ಗೆ ತೀರ್ಮಾನ ತೆಗೆದುಕೊಳ್ಳಬಹುದು. ನಾವು ಅದರಂತೆ ಕೆಲಸ ಮಾಡುತ್ತಿದ್ದೇವೆ ಎಂದರು.

ತಾಯಿ ಹಾಸನಾಂಬೆ ದೇವಿಗೆ ನಮಿಸಲು ನಾನು ಹಾಗೂ ಸಿಎಂ ಸಿದ್ದರಾಮಯ್ಯ ಅವರು ಈ ಜಿಲ್ಲೆಗೆ ಬಂದಿದ್ದೆವು. ಕೃಷ್ಣ ಬೈರೇಗೌಡರು ಈ ಜಿಲ್ಲೆಯ ಉಸ್ತುವಾರಿ ವಹಿಸಿಕೊಂಡ ನಂತರ ಅವರ ಮಾರ್ಗದರ್ಶನದಲ್ಲಿ ರಾಜ್ಯದ ಜನರು ಬಂದು ದೇವಿ ದರ್ಶನ ಪಡೆದಿದ್ದಾರೆ. ಎರಡು ಮೂರು ತಿಂಗಳ ಹಿಂದೆ ಅರಸೀಕೆರೆಗೆ ಹೋದಾಗ ಜೇನುಕಲ್ಲು ಸಿದ್ದೇಶ್ವರ ಸ್ವಾಮಿಯ ದರ್ಶನ ಮಾಡುವ ಭಾಗ್ಯ ದೊರೆತಿತ್ತು ಎಂದರು.

ನಾವು ಹುಟ್ಟುವಾಗ ಖಾಲಿ ಕೈಯಲ್ಲಿ ಬರುತ್ತೇವೆ. ಹೋಗುವಾಗ ಪಾಪ ಪುಣ್ಯಗಳೊಂದಿಗೆ ಹೋಗುತ್ತೇವೆ. ಅದೇ ರೀತಿ ನಮ್ಮ ಸರ್ಕಾರ ಪ್ರತಿ ಹಂತದಲ್ಲೂ ಸಾಕ್ಷಿಗುಡ್ಡೆ ಬಿಟ್ಟು ಹೋಗುತ್ತಿದೆ. ಚುನಾವಣೆ ಸಂದರ್ಭದಲ್ಲಿ ಬಂದಾಗ ನಾನು ಒಂದು ಮಾತು ಹೇಳಿದ್ದೆ. ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಚೆಂದ ಎಂದು. ಐದು ಬೆರಳು ಸೇರಿ ಕೈ ಮುಷ್ಟಿಯಾಯಿತು, ಐದು ಗ್ಯಾರಂಟಿ ಸೇರಿ ಕೈ ಗಟ್ಟಿಯಾಯಿತು. ನಾವು ಕೊಟ್ಟ ಮಾತಿನಂತೆ ನಡೆದಿದ್ದೇವೆ ಎಂದರು.

### ಜನರ ಜೇಬಿಗೆ 1 ಲಕ್ಷ ಕೋಟಿ ಹಾಕಿದ್ದೇವೆ

ನಮ್ಮ ಸರ್ಕಾರ ಗ್ಯಾರಂಟಿ ರೂಪದಲ್ಲಿ 1 ಲಕ್ಷ ಕೋಟಿ ಹಣವನ್ನು ಜನರ ಜೇಬಿಗೆ ಹಾಕಿದೆ. ರೈತರ ಪಂಪ್ ಸೆಟ್ ಗೆ ನೀಡಲಾಗುವ ಉಚಿತ ವಿದ್ಯುತ್ ಗೆ ಸರ್ಕಾರ 20 ಸಾವಿರ ಕೋಟಿ ವೆಚ್ಚ ಮಾಡುತ್ತಿದೆ. ಇಂದಿರಾ ಗಾಂಧಿ ಅವರ ಕಾಲದಲ್ಲಿ ಪಿಂಚಣಿ ಯೋಜನೆ, ಉಳುವವನಿಗೆ ಭೂಮಿ, ಅರಣ್ಯ ಭೂಮಿ ಸಕ್ರಮ ಸೇರಿದಂತೆ ಅನೇಕ ಯೋಜನೆ ನೀಡಿದೆವು. ಸಿಎಂ ಹಾಗೂ ನನ್ನ ಪಕ್ಷ ನನಗೆ ನೀರಾವರಿ ಇಲಾಖೆ ಜವಾಬ್ದಾರಿ ನೀಡಿದೆ. ಈ ಹಿಂದೆ ಹಾಸದ ಜಿಲ್ಲಾಧಿಕಾರಿ ಹಾಗೂ ಎಸ್ ಪಿಗೆ ಈ ಇಬ್ಬರೂ ಹೆಣ್ಣುಮಕ್ಕಳಿಗೆ ನಾನು ಅಭಿನಂದನೆ ಸಲ್ಲಿಸಲೇ ಬೇಕು. ಇಂದು ಎತ್ತಿನಹೊಳೆ ನೀರು ಆಚೆ ಬರಲು ಈ ಇಬ್ಬರು ಅಧಿಕಾರಿಗಳು ಕೊಟ್ಟ ಸಹಕಾರ ಕಾರಣ. ಅದನ್ನು ನಾನು ಮರೆಯಲು ಸಾಧ್ಯವಿಲ್ಲ ಎಂದು ಶ್ಲಾಘಿಸಿದರು.

### ಮೇಕೆದಾಟು, ಎತ್ತಿನಹೊಳೆ ಯೋಜನೆಯಿಂದ ಕುಡಿಯುವ ನೀರಿನ ಸಮಸ್ಯೆ ಬಗೆಹರಿಯಲಿದೆ

ಎತ್ತಿನಹೊಳೆ ನೀರನ್ನು ನಾವು ಆಚೆ ತಂದಿದ್ದೇವೆ. ಈ ಯೋಜನೆಗೆ ಕೇಂದ್ರ, ಅರಣ್ಯ ಇಲಾಖೆಯಿಂದ ಕೆಲವು ತೊಡಕು ಎದುರಾಗಿದೆ. ಈ



ಅಡಚಣೆ ಬಗೆಹರಿದ ಮೂರ್ನಾಲ್ಕು ತಿಂಗಳಲ್ಲಿ ತುಮಕೂರಿನವರೆಗೂ ಈ ನೀರನ್ನು ಹರಿಸಲಾಗುವುದು. ಕಾವೇರಿ ಜಲಾನಯನ ಪ್ರದೇಶದಲ್ಲಿ ಹೇಮಾವತಿ ನೀರು ಕೂಡ ಇದೆ.

ನಾವೆಲ್ಲರೂ ಸೇರಿ ಮೇಕೆದಾಟು ಯೋಜನೆಗೆ ಆಗ್ರಹಿಸಿ ನಮ್ಮ ನೀರು ನಮ್ಮ ಹಕ್ಕು ಎಂದು ಹೆಜ್ಜೆ ಹಾಕಿದೆವು. ನಿಮ್ಮೆಲ್ಲರ ಆಶೀರ್ವಾದದಿಂದ ನನ್ನ ಮಾರ್ಗದರ್ಶನ ಹಾಗೂ ದಿಟ್ಟ ನಿರ್ಧಾರದಿಂದ ಸುಪ್ರೀಂ ಕೋರ್ಟ್ ಕರ್ನಾಟಕ ರಾಜ್ಯಕ್ಕೆ ನ್ಯಾಯ ಒದಗಿಸಿಕೊಟ್ಟಿದೆ. ಮೇಕೆದಾಟು ಯೋಜನೆ ನ್ಯಾಯಾಲಯದಲ್ಲಿ ತೀರ್ಮಾನವಾಗುವುದಿಲ್ಲ, ಇದರ ತಾಂತ್ರಿಕ ಅಂಶ ಕೇಂದ್ರ ಜಲ ಆಯೋಗ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದಲ್ಲಿ ತೀರ್ಮಾನವಾಗಬೇಕು. ಹೀಗಾಗಿ ನ್ಯಾಯಾಲಯಕ್ಕೆ ಅಲೆಯಬೇಡಿ ಎಂದು ರಾಜ್ಯದ ಪರವಾಗಿ ಸುಪ್ರೀಂ ಕೋರ್ಟ್ ಆದೇಶ ನೀಡಿದೆ. ನಿಮ್ಮೆಲ್ಲರ ಪರವಾಗಿ ನಾನು ಇಲ್ಲಿಂದಲೇ ಸುಪ್ರೀಂ ಕೋರ್ಟ್‌ಗೆ ನಮಿಸುತ್ತೇನೆ ಎಂದು ಹೇಳಿದರು.

ಮೇಕೆದಾಟು ಯೋಜನೆ ಆದರೆ ಹಾಸನ, ಮಂಡ್ಯ, ಮೈಸೂರು ಚಾಮರಾಜನಗರ ಸೇರಿದಂತೆ ಈ ಜಲಾನಯನ ಪ್ರದೇಶಕ್ಕೆ ಕುಡಿಯಲು ನೀರು ಸಿಗುತ್ತದೆ. ಕಷ್ಟಕಾಲದಲ್ಲಿ 64 ಟಿಎಂಸಿ ನೀರನ್ನು ಮೇಕೆದಾಟಿನಲ್ಲಿ ಶೇಖರಿಸಿ 400 ಮೆ.ವ್ಯಾಟ್ ವಿದ್ಯುತ್ ಉತ್ಪಾದಿಸುವ ಯೋಜನೆ ಇದಾಗಿದೆ. ಈ ವಿಚಾರವಾಗಿ ನಾನು ಹಾಗೂ ಸಿಎಂ ಚರ್ಚೆ ಮಾಡಿದ್ದು, ಇದರ ಕಾರ್ಯರೂಪಕ್ಕೆ ಮುಂದಾಗಿದ್ದೇವೆ ಎಂದರು.

### ನಮ್ಮ ಆರನೇ ಗ್ಯಾರಂಟಿ ಭೂಮಿ ಗ್ಯಾರಂಟಿ

ಮನುಷ್ಯನ ಬದುಕು ಶಾಶ್ವತವಲ್ಲ, ನಾವು ಬಿಟ್ಟು ಹೋಗುವ ಕೆಲಸಗಳು ಮಾತ್ರ ಶಾಶ್ವತ. ಕೃಷ್ಣ ಬೈರೇಗೌಡರ ಮುಖಂಡತ್ವದಲ್ಲಿ ನಮ್ಮ ಸರ್ಕಾರದ ಆರನೇ ಗ್ಯಾರಂಟಿ ಭೂಮಿ ಗ್ಯಾರಂಟಿ ರಾಜ್ಯದಲ್ಲಿ ಶಾಶ್ವತವಾಗಿ ಉಳಿದಿದೆ. ಎಲ್ಲರಿಗೂ ತಮ್ಮ ಆಸ್ತಿ ದಾಖಲೆ ಭದ್ರಪಡಿಸಿಕೊಳ್ಳುವ ಅವಕಾಶ ಕಲ್ಪಿಸಿದ್ದಾರೆ. ಹಾಸನದಲ್ಲಿ ಅನೇಕ ಯೋಜನೆ ರೂಪಿಸುತ್ತಿದ್ದಾರೆ. ನಮ್ಮ ಮಾತು ನಿಧಾನವಾಗಿರಬೇಕು, ಕಾಯಕ ಪ್ರಧಾನವಾಗಿರಬೇಕು ಎಂದು ಹಿರಿಯರು ಹೇಳಿದ್ದಾರೆ ಎಂದರು. ಕೃಷ್ಣ ಬೈರೇಗೌಡರು ಸುಮಾರು 50 ಸಾವಿರ ಜನರಿಗೆ ಅವರ ಆಸ್ತಿ ದಾಖಲೆಗಳನ್ನು ಸರಿಮಾಡಿ ಕೊಟ್ಟಿದ್ದಾರೆ. ವಿಜಯನಗರದಲ್ಲಿ 1,11,11,111 ಜನ ತಾಂಡಾ ಜನರಿಗೆ ತಮ್ಮ ಆಸ್ತಿ ದಾಖಲೆಗಳನ್ನು ನೀಡಿದ್ದೇವೆ. ನಮ್ಮ ಹುಟ್ಟು ನಮ್ಮ ಕೈಯಲ್ಲಿ ಇಲ್ಲ, ಆದರೆ ನಾವು ಮುಟ್ಟಬೇಕಾದ ಗುರಿ ನಮ್ಮ ಕೈಯಲ್ಲೇ ಇದೆ. ನಾವು ಈಗಾಗಲೇ ಕೊಟ್ಟ ಭರವಸೆಗಳನ್ನು ಈಡೇರಿಸಿದ್ದೇವೆ. ಆ ಮೂಲಕ ಕೊಟ್ಟ ಮಾತು ಉಳಿಸಿಕೊಂಡಿದ್ದು, ಇದೇ ಮಾರ್ಗದಲ್ಲಿ ಜನರ ಕಲ್ಯಾಣ ಮಾಡಿಕೊಂಡು ಈ ಸರ್ಕಾರ ಮುಂದೆ ಸಾಗಲಿದೆ" ಎಂದು ಭರವಸೆ ನೀಡಿದರು.

### ಈ ಸಂಸದ ನಿಮ್ಮ ಗೌರವಕ್ಕೆ ಧಕ್ಕೆ ತರುವುದಿಲ್ಲ, ಸ್ವಾಭಿಮಾನದ ಬದುಕಿಗೆ ಶಕ್ತಿ ತುಂಬುತ್ತಾರೆ

ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ ಎಂದು ನಾವು ನಂಬಿದ್ದೇವೆ. ಏನೇ ಸಮಸ್ಯೆ ಇದ್ದರೂ ಹಾಸನಕ್ಕೆ ಹೊಸ ರೂಪ ನೀಡಲು ನಾವು ಬದ್ಧವಾಗಿದ್ದೇವೆ. ಈ ಹಿಂದೆ ಇದ್ದ ಆಡಳಿತ ಮಾದರಿಗೆ ಕೊನೆ ಹಾಡಿದ್ದೇವೆ. ಇದು ನಿಮ್ಮ ಹಾಗೂ ಜನರ ಸರ್ಕಾರ. ಲೋಕಸಭೆ ಚುನಾವಣೆಯಲ್ಲಿ ನೀವು ನಮ್ಮ ಅಭ್ಯರ್ಥಿ ಶ್ರೇಯಸ್ ಪಟೇಲ್ ಅವರನ್ನು ಗೆಲ್ಲಿಸಿ ಶಕ್ತಿ ತುಂಬಿದ್ದೀರಿ, ನಿಮಗೆ ಅಭಿನಂದನೆ ಸಲ್ಲಿಸುತ್ತೇನೆ. ನಮ್ಮ ಸಂಸದ ನಿಮ್ಮ ಗೌರವಕ್ಕೆ ಎಂದೂ ಧಕ್ಕೆ ತರುವುದಿಲ್ಲ. ನಿಮ್ಮ ಸ್ವಾಭಿಮಾನದ ಬದುಕಿಗೆ ಶಕ್ತಿ ತುಂಬುವ ಕುಟುಂಬದವರಾಗಿದ್ದಾರೆ. ನೀರಾವರಿ ಇಲಾಖೆ ಮಾತ್ರವಲ್ಲ, ಎಲ್ಲಾ ಇಲಾಖೆಯ ಸಚಿವರು ಇಲ್ಲಿಗೆ ಬಂದಿರುವುದು ನಿಮ್ಮ ಕೈ ಬಲಪಡಿಸಲು. ನಾವು ನಿಮ್ಮ ಜೊತೆ ಇದ್ದೇವೆ ಎಂದು ಹೇಳಲು ಬಂದಿದ್ದೇವೆ" ಎಂದು ವಿಶ್ವಾಸ ತುಂಬಿದರು.

ಇಂದು ನನ್ನ ಭೂಮಿ ಹೆಸರಿನಲ್ಲಿ ದರ್ಖಾಸ್ತು, ಪೋಡಿ ದಾಖಲೆ ನೀಡಲಾಗುತ್ತಿದೆ. ಇದು ಸಾಮಾನ್ಯವಾದ ಕೆಲಸವಲ್ಲ. ಈ ಹಿಂದೆ ಒಂದು ಪೋಡಿ ಮಾಡಿಸಲು ಎಷ್ಟು ಲಂಚ ಕೊಡಬೇಕಿತ್ತು ಎಂದು ರೈತರಿಗೆ ಮಾತ್ರ ಗೊತ್ತು. ಈ ಸಮಸ್ಯೆಯನ್ನು ನಮ್ಮ ಸರ್ಕಾರ ಬಗೆಹರಿಸಿಕೊಂಡು ಬರುತ್ತಿದೆ. ನಿಮ್ಮ ವಿಶ್ವಾಸ ಸದಾ ನಮ್ಮ ಮೇಲಿರಲಿ ಎಂದು ತಿಳಿಸಿದರು.

## ಟನೆಲ್ ನಿರ್ಮಾಣಕ್ಕೆ ಎನ್‌ಒಸಿ: ಜಾರಕಿಹೊಳಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಷ್ಟ್ರೀಯ 75 ಹಾದು ಹೋಗಿರುವ ಶಿರಾಡಿಘಾಟ್‌ನಲ್ಲಿ ಸಂಚಾರ ದಟ್ಟಣೆ ನಿವಾರಣೆ ಮಾಡಲು ಪೂರಕವಾದ ಉದ್ದೇಶಿತ ಸುರಂಗಮಾರ್ಗ(ಟನೆಲ್) ನಿರ್ಮಾಣ ಸಂಬಂಧ ನಾವು ಎನ್‌ಒಸಿ ಕೊಟ್ಟಿದ್ದೇವೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ನಗರದಲ್ಲಿಂದು ಮಾತನಾಡಿದ ಅವರು, ಟನೆಲ್ ನಿರ್ಮಾಣಕ್ಕೆ ನಮ್ಮದೇನೂ ತಕರಾರು ಇಲ್ಲ, ಕಾಮಗಾರಿ ಮುಂದುವರಿಸುವುದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ಕೇಂದ್ರ ಸರ್ಕಾರದ ಕೆಲಸ ಎಂದರು.

ಕಳೆದ ಮೂರು ವರ್ಷಗಳಿಂದ ಹಾಸನ ಜಿಲ್ಲೆಗೆ ನಮ್ಮ ಇಲಾಖೆ ವ್ಯಾಪ್ತಿಯಲ್ಲಿ 300 ಕೋಟಿ ರೂ.ಗಳನ್ನು ಎಲ್ಲ ಕ್ಷೇತ್ರಗಳಿಗೆ ನೀಡಿದ್ದೇವೆ. ಮುಂದೆಯೂ ಹೊಸ ರಸ್ತೆ, ದುರಸ್ತಿ ಹಾಗೂ ಸೇತುವೆ ನಿರ್ಮಾಣ ಮಾಡಬೇಕಿದೆ ಎಂದರು.

ಕೋಟಿ ಮಂಜೂರು ಮಾಡಿದ್ದಾರೆ. ಅದರ ಲಾಭ ಹಾಸನಕ್ಕೂ ಆಗಿದೆ. ಬೇಲೂರಿನ ಯಗಚಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಿಸಲು 50 ಕೋಟಿ, ಅರಕಲಗೂಡಿನ ಕಟ್ಟೆಪುರ-ಕೊಣನೂರು ಸೇತುವೆಗೆ 45 ಕೋಟಿ ನೀಡಿದ್ದೇವೆ. ಇದು ಮೊದಲ ಹಂತ, ಮುಂದಿನ ದಿನಗಳಲ್ಲಿ ಮತ್ತಷ್ಟು ಅನುದಾನ ನೀಡಲಾಗುವುದು ಎಂದು ಭರವಸೆ ನೀಡಿದರು. ಹಿಂದೆ ಮಲೆನಾಡು ಭಾಗದಲ್ಲಿ ಕಾಡಾನೆ ಹಾವಳಿ ತಡೆಗೆ 100 ಕಿಮೀ ಬ್ಯಾರಿಕೇಡ್ ನಿರ್ಮಿಸುವ ಕಾರ್ಯ ಆರಂಭಿಸಲಾಗಿತ್ತು, ಅದು ಈಗಲೂ ಮುಂದುವರಿದಿದೆ ಎಂದರು.

ಹಾಸನ ಮಾತ್ರವಲ್ಲ ಬೆಳಗಾವಿ ಸೇರಿದಂತೆ ರಾಜ್ಯ ಹಲವು ಕಡೆಗಳಲ್ಲಿ ಹಳೆಯ ಕಾಲುವೆಗಳಿಂದ ನೀರು ವ್ಯರ್ಥವಾಗುತ್ತಿದೆ. ನಾಲೆಗಳನ್ನು ದುರಸ್ತಿ ಮಾಡಿದರೆ ನೀರು ಉಳಿಕೆ ಆಗಿ, ರೈತರಿಗೆ ಅನುಕೂಲ ಆಗಲಿದೆ. ಮುಂದೆ ಹೊಸ ಕಾಮಗಾರಿ ನಿಲ್ಲಿಸಿ, ರಾಜ್ಯದಲ್ಲಿ ಹಳೆಯ ಕಾಲುವೆ ದುರಸ್ತಿ ಮಾಡಿದರೆ, ನೀರು ವ್ಯರ್ಥವಾಗೋದನ್ನು ಉಳಿಸಿ ರೈತರಿಗೆ ಬಹಳಷ್ಟು ಅನುಕೂಲ ಆಗಲಿದೆ ಎಂದು ಸಿಎಂ-ಡಿಸಿಎಂ ಅವರಿಗೆ ಮನವರಿಕೆ ಮಾಡಿದರು. ಮುಂದೆಯೂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ರಾಜ್ಯ, ಜಿಲ್ಲೆ ಪ್ರಗತಿಯತ್ತ ಸಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕೃಷ್ಣ ಬೈರೇಗೌಡ ಅವರು ರಾಜ್ಯದಲ್ಲೇ ಉತ್ತಮ ಕೆಲಸ ಮಾಡಿದ್ದಾರೆ. ಹಾಸನಕ್ಕೆ ಮಾತ್ರ ಅಲ್ಲ, ರಾಜ್ಯಕ್ಕೆ ಲಾಭ ಸಿಗುತ್ತಿದೆ, ಇದು ಹೆಮ್ಮೆಯ ವಿಷಯ ಎಂದರು.

## ಸರ್ಕಾರ ಹಣಕಾಸು ಸ್ಥಿತಿ ಸುಭದ್ರ: ಕೆಎಂಶಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಮ್ಮ ಸರ್ಕಾರ ಗ್ಯಾರಂಟಿ ಯೋಜನೆ ಜಾರಿಗೆ ತಂದು ಬಡವರಿಗೆ ಅನ್ನಕೊಡುವ, ಶಕ್ತಿ ಕೊಡುವ ಕೆಲಸ ಮಾಡುತ್ತಿದೆ. ಸರ್ಕಾರದ ಹಣಕಾಸು ಸ್ಥಿತಿ ಸುಭದ್ರವಾಗಿದೆ ಎಂದು ಕರ್ನಟಕ ಗೃಹಮಂಡಳಿ ಅಧ್ಯಕ್ಷರೂ ಆದ ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಹೇಳಿದರು.

ಸರ್ಕಾರದ ಪರವಾಗಿ ಆಶಯ ನುಡಿಗಳನ್ನಾಡಿದ ಅವರು, ಹಣಕಾಸು ಸ್ಥಿತಿಗತಿ ಬಗ್ಗೆ ಕೆಲವರು ಟೀಕೆ ಮಾಡುತ್ತಾರೆ. ಆದರೆ ಸರ್ಕಾರದ ಹಣಕಾಸು ವ್ಯವಸ್ಥೆ ಸುಭದ್ರವಾಗಿದೆ. ಹಿಂದಿನ ಸರ್ಕಾರ 2 ಲಕ್ಷ ಕೋಟಿ ಅಧಿಕ ಕಾಮಗಾರಿ ಬಿಲ್ ಉಳಿಸಿ ಹೋಗಿತ್ತು. 64 ಸಾವಿರ ಕೋಟಿ ಪೆಡ್ಡಿಂಗ್ ಬಿಲ್ ಬಿಟ್ಟು ಹೋಗಿದ್ದರು. ಇದನ್ನು ತೀರಿಸಲು ಸಂಕಷ್ಟಪಟ್ಟಿದ್ದೇವೆ. ಆದರೂ ಸಿಎಂ ಸಿದ್ದರಾಮಯ್ಯ ಅವರು ಎರಡು ಬಜೆಟ್ ಮಂಡಿಸಿ ಉತ್ತಮ ಸಾಧನೆ ಮಾಡಿದ್ದಾರೆ. 110 ಲಕ್ಷ ಕೋಟಿಯನ್ನು ಗ್ಯಾರಂಟಿಗೆ ವಿನಿಯೋಗ ಮಾಡಿದ್ದಾರೆ. ರಾಜ್ಯದಲ್ಲಿ ಯಾವುದೇ ಯೋಜನೆ ನಿಂತಿಲ್ಲ. ಈ ಬಹಿರಂಗ ಚರ್ಚೆ ಆಗಲಿ ಎಂದು ಸವಾಲು ಹಾಕಿದರು.

ನಾವು ನುಡಿದಂತೆ ನಡೆದಿದ್ದೇವೆ. ಸಿದ್ದು ಸರ್ಕಾರ ಸುಭದ್ರವಾಗಿದೆ. ಬೇಕಿದ್ದರೆ ಚರ್ಚೆಗೆ ಬನ್ನಿ, ಹಣಕಾಸಿನ ವ್ಯವಸ್ಥೆ ಹದಗೆಟ್ಟಿದ್ದರೆ ಬಹಿರಂಗ ಕ್ಷಮೆಯಾಚಿಸುತ್ತೇವೆ ಎಂದರು.

ನಮ್ಮ ಸರ್ಕಾರ ಪಡೆದಿದ್ದ ಸಾಲದಲ್ಲಿ 76 ಸಾವಿರ ಕೋಟಿ ಹಣ ಹಾಗೆಯೇ ಇದೆ. ಸರ್ಕಾರದ ಮೇಲೆ ವಿನಾಕಾರಣ ಆರೋಪ ಬೇಡ, ಹಣಕಾಸು ವಿಚಾರ ಸಂಬಂಧ ಅಧಿವೇಶನದಲ್ಲೂ ಕೂಡ ಚರ್ಚೆ ಮಾಡುವ ಎಂದರು.

ಇದೇ ವೇಳೆ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಗಳಿಂದ ಸಂಕಷ್ಟ ಎದುರಾಗಿದೆ. ಪಿಎಂಎವೈ ಮನೆಗಳಿಗೆ ಹಣ ಸಿಕ್ಕಿಲ್ಲ, ಇದನ್ನು ಕೇಳೋರು ಇಲ್ಲಾ, ಕೇಂದ್ರದ್ದು ಅರ್ಧ ನಮ್ಮದು ಅರ್ಧ ಅಂತಾರೆ, ಆದರೆ ಅವರು ಕೊಡಲ್ಲ, ಹಾಗಾಗಿ ಕೇಂದ್ರದ ಪುರಸ್ಕೃತ ಯೋಜನೆ ಬೇಡ, ಜೆಜೆಎಂ ಕುಡಿಯುವ ನೀರಿನ ಯೋಜನೆಗೆ ನಾವು 28 ಸಾವಿರ ಕೋಟಿ ಖರ್ಚು ಮಾಡಿದ್ದೇವೆ, ಕೇಂದ್ರ 11 ಸಾವಿರ ಕೋಟಿ ಕೊಟ್ಟು ದುಡ್ಡಿಲ್ಲ ಅಂತಾರೆ. ನಮ್ಮಿಂದ ಸಾವಿರಾರು ಕೋಟಿ ತೆರಿಗೆ ಪಡೆಯುವ ಕೇಂದ್ರದವರು, ನಮಗೆ ಅರ್ಧದಷ್ಟನ್ನೂ ಕೊಡುವುದಿಲ್ಲ ಈ ಬಗ್ಗೆಯೂ ಚರ್ಚೆಗೆ ಬರಲಿ ಎಂದು ಮರು ಸವಾಲು ಹಾಕಿದ ಕೆಎಂಶಿ, ನಮ್ಮ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವವರ ವಿರುದ್ಧ ನಾವು ಒಗ್ಗಟ್ಟಾಗಿ ನಿಲ್ಲಬೇಕಿದೆ ಎಂದರು. ರೈತರಿಗೆ ಭೂ ದಾಖಲೆ ಸಿಗದೆ ಸಂಕಷ್ಟ ಎದುರಿಸುತ್ತಿದ್ದಾಗ ಕೃಷ್ಣ ಬೈರೇಗೌಡರು ಕ್ರಾಂತಿಯನ್ನೇ ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ವೇಳೆ ಹಣ ಕೊಟ್ಟು ಜನರನ್ನು ಕರೆತರಲಾಗಿದೆ ಎಂಬ ಆರೋಪಕ್ಕೆ ಕಿಡಿಕಾರಿದ ಶಿವಲಿಂಗೇಗೌಡ, ಹಿಂದೆ ಯಾರು, ಯಾವ ರೀತಿ ಸಭೆ ಮಾಡಿದ್ದಾರೆ ಎಂಬುದು ನನಗೆ ಗೊತ್ತಿದೆ. ಮಿಲ್ಕ್ ಯೂನಿಯನ್, ಡಿಸಿಸಿ ಬ್ಯಾಂಕ್ ಹಣ ಖರ್ಚು ಮಾಡಿರುವುದು ನಾನು ಕಂಡಿದ್ದೇನೆ ಎಂದು ಹೇಳುವ ಮೂಲಕ ಹೆಸರು ಹೇಳದೆಯೇ ಮಾಜಿ ಸಚಿವ ರೇವಣ್ಣ ವಿರುದ್ಧ ಸಿಟ್ಟು ಹೊರ ಹಾಕಿದರು.

ನಾವು ದುಡ್ಡುಕೊಟ್ಟಿಲ್ಲ, ಪ್ರೀತಿಯಿಂದ ಜನ ಬಂದಿದ್ದಾರೆ ಎಂದರು.

## ನಾಳೆಯಿಂದ ಆದಿ ಲಕ್ಷ್ಮಿ ಪುರಾಣ




ಒಡಹುಟ್ಟಿದವರ ಬಂಧ ಬೆಸೆಯಲು ಹೋಗುವ ಆದಿ-ಲಕ್ಷ್ಮಿಯ ಪುರಾಣ ಇದೇ ಡಿಸೆಂಬರ್ 8 ರಿಂದ ರಾತ್ರಿ 9 ಗಂಟೆಗೆ ಜೀ ಕನ್ನಡ ವಾಹಿನಿಯಲ್ಲಿ

ಸದಾ ಹೊಸತನದೊಂದಿಗೆ ವೀಕ್ಷಕರನ್ನು ಮನರಂಜಿಸಿ ನಂ.1 ಸ್ಥಾನ ಪಡೆದಿರುವ ಜೀ ಕನ್ನಡ 2025 ನ್ನು ವರ್ಷದ ಕೊನೆಗೆ ವೀಕ್ಷಕರಿಗೆ ಮತ್ತೊಂದು ಸರ್ಪ್ರೈಸ್ ನೀಡುತ್ತಿದೆ. ವಿಭಿನ್ನ ದಿಕ್ಕಿನಲ್ಲಿ ಸಾಗುವ ಇಬ್ಬರ ಪ್ರಯಾಣ ಆದಿ ಲಕ್ಷ್ಮಿ ಪುರಾಣ ಇದೇ ಡಿಸೆಂಬರ್ 8 ರಿಂದ ರಾತ್ರಿ 9 ಗಂಟೆಗೆ ಜೀ ಕನ್ನಡದಲ್ಲಿ ಪ್ರಸಾರ ಆಗಲಿದೆ.

ಕಿರುತೆರೆಯಲ್ಲಿ ಸದ್ದು ಮಾಡಲು ಸಿದ್ಧವಾಗಿರುವ "ಆದಿಲಕ್ಷ್ಮೀ ಪುರಾಣ" ಸಂಪ್ರದಾಯ ಮತ್ತು ಆಧುನಿಕತೆಯ ಮಧ್ಯೆ ನಿರ್ಮಾಣವಾದ ಕಥೆಯಾಗಿದೆ. ಹಳ್ಳಿ ಹುಡುಗಿ ಲಕ್ಷ್ಮಿ, ಸಿಟಿ ಹುಡುಗ ಆದಿ ನಡುವಿನ ಕಥೆಯನ್ನು ಪ್ರೇಕ್ಷಕರ ಮುಂದಿಡಲಿದೆ. ಮೊದಲ ಭೇಟಿಯಲ್ಲೇ ಆದಿಯಿಂದ ತಿರಸ್ಕರಿಸಲ್ಪಟ್ಟ ಲಕ್ಷ್ಮಿ ಪುನಃ ಆತನ ಜಗತ್ತಿಗೆ ಮರಳಿ ಬರುತ್ತಾಳೆ. ಆದಿಯ ಪ್ರೀತಿ ಪಡೆಯಲು ಪರದಾಡುವ ಲಕ್ಷ್ಮಿ ಆತನ ತಾತ ಧರ್ಮರಾಜ್ ಅವರು ನೀಡುವ ಕಠಿಣ ಸವಾಲುಗಳನ್ನು ಎದುರಿಸುತ್ತಾಳೆ. ಮನೆ, ಕಾಲೇಜು ಇವೆರಡರನ್ನು ಲಕ್ಷ್ಮಿ ಹೇಗೆ ಸರಿದೂಗಿಸಿಕೊಂಡು ಹೋಗುತ್ತಾಳೆ ಎಂಬುದು ಈ ಕಥೆಯ ಮುಖ್ಯ ಸಾರಾಂಶ.

ಈ ಧಾರಾವಾಹಿಯ ಕಥೆಯನ್ನು ಮತ್ತಷ್ಟು ಜೀವಂತಗೊಳಿಸೋದು ಅದ್ಭುತವಾದ ತಾರಾಬಳಗ. ರಜನೀಶ್ ಮತ್ತು ಆಶಾ ಅಯ್ನರ್ ಆದಿ ಮತ್ತು ಲಕ್ಷ್ಮಿ ಪಾತ್ರ ನಿರ್ವಹಿಸುತ್ತಿದ್ದಾರೆ. ಅಷ್ಟೇ ಅಲ್ಲದೇ ಈ ಧಾರಾವಾಹಿಯಲ್ಲಿ ಸಂಜೀವ ಅನ್ನುವ ಒಬ್ಬ ಸಾಧಾರಣ ಹಳ್ಳಿ ಟೀಚರ್ ಮತ್ತು ಅಮೃತ, ಸಿಟಿ ಹುಡುಗಿ ಪಿಎಚ್ಡಿ ಆಕಾಂಕ್ಷಿ, ಇವರಿಬ್ಬರು ಮದುವೆ ಆದ್ಮೇಲೆ ಇವರಿಬ್ಬರ ಬದುಕು ಹೇಗೆ ಬದಲಾಗುತ್ತೆ ಅನ್ನೋ ಕಥೆಯು ಕಾಣಸಿಗಲಿದೆ. ಇನ್ನು ಈ ಧಾರಾವಾಹಿಯಲ್ಲಿ ಮಂಜುನಾಥ ಹೆಗ್ಡೆ, ಅಶೋಕ್ ಶರ್ಮಾ, ರಕ್ಷಿತಾ, ಸುಷ್ಮಾ ನಾಣಯ್ಯ, ಮಾಲತಿ ಸರ್ದೇಶಪಾಂಡೆ, ಕೈಲಾಶ್, ಜ್ಯೋತಿ, ಸವಿತಾ ಕೃಷ್ಣಮೂರ್ತಿ ಮತ್ತು ಭಾಗ್ಯಶ್ರೀ ರಾವ್ ಅಂತಹ ಹೆಸರಾಂತ ಕಲಾವಿದರು ಪಾತ್ರ ನಿರ್ವಹಿಸುತ್ತಿದ್ದಾರೆ. ಒಟ್ಟಿನಲ್ಲಿ ಅದ್ಬುತ ನಟನೆ, ಅತ್ಯುತ್ತಮ ತಾರಾಬಳಗ, ವಿಭಿನ್ನ ಕಥೆಯೇ ಆದಿಲಕ್ಷ್ಮಿ ಪುರಾಣದ ಪ್ಲಸ್ ಪಾಯಿಂಟ್. ಇನ್ನು ಇಷ್ಟು ದಿನ ರಾತ್ರಿ 9 ಗಂಟೆಗೆ ಪ್ರಸಾರ ಆಗುತ್ತಿದ್ದ ಜನಪ್ರಿಯ ಧಾರಾವಾಹಿ ಶ್ರೀ ರಾಘವೇಂದ್ರ ಮಹಾತ್ಮೆ ಈ ವಾರದಿಂದ ಪ್ರತಿ ಶನಿವಾರ ಮತ್ತು ಭಾನುವಾರ ಸಂಜೆ 6 ಗಂಟೆಯಿಂದ 7 ಗಂಟೆಯ ವರೆಗೆ ಪ್ರಸಾರ ಆಗಲಿದೆ.

## ಏತ ನೀರಾವರಿ ಯೋಜನೆಗಳಿಗೆ ಮರುಜೀವ : ಶಾಸಕ ಸಿಮೆಂಟ್ ಮಂಜು

# ಆಲೂರು ತಾಲ್ಲೂಕು ತ್ರೈ ಮಾಸಿಕ ಪ್ರಗತಿ ಪರಿಶೀಲನ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಏತ ನೀರಾವರಿ ಯೋಜನೆಗೆ ಮರು ಜೀವ ನೀಡುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಸಮಿತಿ ರಚನೆ ಮಾಡಿದ್ದು ಶೀಘ್ರದಲ್ಲಿ ಸ್ಥಗಿತ ಗೊಂಡಿರುವ ಯೋಜಗಳಿಗೆ ಚಾಲನೆ ನೀಡಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಶುಕ್ರವಾರ ತಾಲೂಕು ಪಂಚಾಯತಿ ಸಭಾಂಗಣ ದಲ್ಲಿ ನೆಡೆದ ತಾಲ್ಲೂಕು ಮಟ್ಟದ ತ್ರೈ ಮಾಸಿಕ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದರು.

ನೀರಿಗೆ ಬರವಿಲ್ಲ, ತಾಂತ್ರಿಕ ಸಮಸ್ಯೆ ತೊಂದರೆ ಹಾಗೂ ನಿರ್ವಹಣೆ ಇಲ್ಲದೆ ಏತ ನೀರಾವರಿ ಯೋಜನೆ ಸ್ಥಗಿತಗೊಂಡಿದೆ. ಸರ್ಕಾರ ರಚಿಸಿರುವ ನೂತನ ಸಮಿತಿಯಲ್ಲಿ ನಾನು ಸದಸ್ಯನಾಗಿದ್ದು ಪ್ರತಿ ಸಭೆಯಲ್ಲಿ ಕ್ಷೇತ್ರದ ನೀರಾವರಿ ಸಮಸ್ಯೆ ಕುರಿತು ನಿರಂತರವಾಗಿ ಬೆಳಕು ಚೆಲ್ಲುತ್ತಿದ್ದೇ ಎಂದರು.ತಾಲೂಕಿಲ್ಲಿರುವ ಏದರ ನೀರಾವರಿ ಯೋಜನೆಗಳು ಚಾಲನೆಗೊಳ್ಳಲು ಸಮಸ್ಯೆಗಳು ಏನು ಎಂದು ಅಧಿಕಾರಿಗಳಿಗೆ ಪ್ರಶ್ನಿಸಿದ ಶಾಸಕರಿಗೆ ಪ್ರತಿಕ್ರಿಯೆ ನೀಡಿದ ಅಧಿಕಾರಿಗಳು,ರಾಮೇನಹಳ್ಳಿ, ಹೊಸಪುರ ಏತ ನೀರಾವರಿ ಘಟಕದಲ್ಲಿ ಶೇ.90 ರಷ್ಟು ಕಾಮಗಾರಿ ಮುಗಿದಿದ್ದು. ವಿದ್ಯುತ್ ಸಂಪರ್ಕ ನೀಡಿದರೆ ಚಾಲನೆ ನೀಡಬಹುದು ಎಂದು ಉತ್ತರಿಸಿದರು.ಇನ್ನೂ 15 ದಿನದ ಒಳಗಾಗಿ ಏತ ನೀರಾವರಿ ಯೋಜನೆ ಘಟಕ ಕಾರ್ಯ ನಿರ್ವಹಿಸಬೇಕು ಅದಕ್ಕೆ ಬೇಕಾದ ಅಗತ್ಯ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಶಾಸಕರು ಸೂಚನೆ ನೀಡಿದರು.ವಾಟೆಹೊಳೆ ಮತ್ತು ಯಗಚಿ ಅಣೆಕಟ್ಟಿನಿಂದ ಹರಿಯುವ ವಿತರಣೆ




ನಾಲೆಗಳು ಸರಿಯಾದ ನಿರ್ವಹಣೆ ಇಲ್ಲದೆ ಶೀತಲಗೊಂಡಿದ್ದು ನಾಲೆಗಳನ್ನು ಪುನಃಶ್ಚೇತನಗೊಳಿಸಿದರೆ ಸುಮಾರು 18 ಸಾವಿರ ಎಕರೆ ಪ್ರದೇಶಕ್ಕೆ ನೀರುಹಾಯಿಸಬಹುದು ಈ ಬಗ್ಗೆ ಇಂಜಿನಿಯರ್ ಗಳು ನಾಲೆಗಳ ಪುನಃಶ್ಚೇತನ ಬೇಕಾದ ಅನುದಾನಕ್ಕಾಗಿ ಅಂದಾಜು ಪಟ್ಟಿ ತಯಾರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರೊಂದಿಗೆ ಸೌಜನ್ಯದಿಂದ ನಡೆದುಕೊಳ್ಳಿ :ಸರ್ಕಾರಿ ಕಚೇರಿಗಳಿಗೆ ಭೇಟಿನೀಡುವ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ, ಸಣ್ಣಪುಟ್ಟ ಕೆಲಸಗಳಿಗೂ ಜನರು ತಿಂಗಳುಗಟ್ಟಲೆ ತಹಶೀಲ್ದಾರ್ ಕಚೇರಿ ಅಲೆದಾಡಬೇಕಿದೆ. ಅಧಿಕಾರಿಗಳು ಜನಸಾಮಾನ್ಯರಿಗೆ ವಿನಾಃ ಕಾರಣ ಸತಾಯಿಸಿದರೇ ಸಹಿಸುವುದಿಲ್ಲ ಎಂದು ಹೇಳಿದರು.

ಸರ್ಕಾರಿ ಭೂಮಿ ಸಂರಕ್ಷಿಸುವತ್ತ ಅಧಿಕಾರಿಗಳು ಆಸಕ್ತಿ ವಹಿಸಿಬೇಕು.ಭೂ ಕಬಳಿಕೆ ನಿರಂತರವಾಗಿ ನಡೆದಿದ್ದು, ಭೂ ಕಬಳಿಕೆ ಆಗದಂತೆ ತಡೆಯುವುದು ಅತೀ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಸರ್ಕಾರಿ ಭೂಮಿ ಒತ್ತುವರಿ ಮಾಡುವುದು ಅಥವಾ ಭೂ ಕಬಳಿಕೆ ಆಗದಂತೆ ಗಮನಹರಿಸುವುದು ವಿವಿಧ ಇಲಾಖೆಗಳ ಜವಾಬ್ದಾರಿಯಾಗಿದೆ. ಈ ಹಿಂದೆ ತಾಲೂಕಿನಲ್ಲಿ ವಿವಿಧ ಇಲಾಖೆಗಳಲ್ಲಿ ಸರ್ಕಾರಿ ಬಳಕೆಗೆಂದು ದಾನ ನೀಡಿರುವ ಜಾಗವನ್ನು ಸರ್ಕಾರದ ಖಾತೆ ಹೆಸರಿಗೆ ಖಾತೆ ಮಾಡಿಸಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಹೇಳಿದರು.ತಾಲ್ಲೂಕಿನ ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸರ್ಕಾರಿ ಜಾಗಗಳನ್ನು ಅಧಿಕಾರಿಗಳು ಗುರುತಿಸಿ ಮಾಹಿತಿ ನೀಡಬೇಕು. ಸರ್ಕಾರಿ ಜಾಗಗಳಿದ್ದರೆ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಸಹಾಯಕವಾಗುತ್ತದೆ ಎಂದರು.

ತೋಟಗಾರಿಕೆ ಇಲಾಖೆಯ ಪ್ರಗತಿ ಪರಿಶೀಲನೆ ವೇಳೆ ಸಹಾಯಕ ನಿರ್ದೇಶಕ ನೀಡಿದ ಅಸಮಂಜಸ ಮಾಹಿತಿಗಳ ಬಗ್ಗೆ ಶಾಸಕರು ಬೇಸರ ವ್ಯಕ್ತಪಡಿಸಿ, ಇಲಾಖೆಯ ವತಿಯಿಂದ ನೀಡುವ ಯೋಜನೆಗಳು ಜನರಿಗೆ ತಲುಪುತ್ತಿಲ್ಲ ವೆಂಬ ದೂರುಗಳಿವೆ. ಈ ಬಗ್ಗೆ ನೀವು ನೀಡಿರುವ ಫಲಾನುಭವಿಗಳ ತೋಟಗಳಿಗೆ ಖುದ್ದು ತೆರಳಿ ಪರಿಶೀಲನೆ ಮಾಡುವುದಾಗಿ ಎಚ್ಚರಿಸಿದರು.ಸರ್ಕಾರಿ ಶಾಲೆಗಳು ಉಳಿದರೆ ಮಾತ್ರ ಬಡಮಕ್ಕಳಿಗೆ ಶಿಕ್ಷಣ ಕೊಡಲು ಸಾಧ್ಯ. ಇಲ್ಲದಿದ್ದರೆ ಶಿಕ್ಷಣ ಎಂಬುದು ಬಡವರ ಮಕ್ಕಳಿಗೆ ಗಗನ ಕುಸುಮವಾಗಲಿದೆ ಆದ್ದರಿಂದ ಶಾಲೆಗಳ ಉಳುವಿಗೆ ಅಧಿಕಾರಿಗಳು ಶ್ರಮಿಸುವಂತೆ ತಿಳಿಸಿದರು.

ತಕ್ಷಣ ವಿದ್ಯುತ್ ಸಂಪರ್ಕ ನೀಡಿ: ಕುಡಿಯುವ ನೀರಿಗೆ ಯಾವುದೇ ಅಡಚಣೆಯಾಗದಂತೆ ಅಧಿಕಾರಿಗಳು ಗಮನ ಹರಿಸಬೇಕು.ಬಾಕಿ ಇರುವ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಿ ಕುಡಿಯುವ ನೀರು ಒದಗಿಸಬೇಕು. ಬಿಲ್ ಪಾವತಿ ಮಾಡದೆ ಇರುವ ಗ್ರಾಮ ಪಂಚಾಯತಿ, ಅಂಗನವಾಡಿ, ಶಾಲೆಗಳಿಗೆ ವಿದ್ಯುತ್ ಸಂಪರ್ಕ ಕಡಿಗೊಳಿಸದೆ ಬಿಲ್ ಪಾವತಿಗೆ ಕ್ರಮ ವಹಿಸಬೇಕು ಎಂದು ಹೇಳಿದರು. ಸಭೆಯಲ್ಲಿ ಆರೋಗ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಗ್ರಾಮಪಂಚಾಯ್ತಿಗಳ ಮೂಲಕ ಸಾರ್ವಜನಿಕರಿಗೆ ಸರ್ಕಾರದ ಸವಲತ್ತುಗಳು ಸಮರ್ಪಕವಾಗಿ ನೀಡಲಾಗುತ್ತಿದೆಯೆಂಬ ಬಗ್ಗೆ ಶಾಸಕರು ಮಾಹಿತಿ ಕೇಳಿದರು.

ಇದೆ ವೇಳೆ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಸೂಕ್ತ ಸಮಯಕ್ಕೆ ಚಿಕಿತ್ಸೆ ಸಿಗದೇ, ವೈದ್ಯರ ನಿರ್ಲಕ್ಷಕ್ಕೆ ಮೃತ ಪಟ್ಟ ನವಿದ್ ಅಹಮದ್ ಶರೀಫ್ ಪುತ್ರಿಗೆ ಸರ್ಕಾರಿ ಆಸ್ಪತ್ರೆ ಗಣಕಯಂತ್ರ ಆಪರೇಟರ್ ಹುದ್ದೆಗೆ ಮಂಜೂರಾತಿ ಪತ್ರವನ್ನು ಶಾಸಕರು ನೀಡಿದರು

ಈ ಸಂಧರ್ಭದಲ್ಲಿ ತಹಸೀಲ್ದಾರ್ ಮಲ್ಲಿಕಾರ್ಜುನ್, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸುಭ್ರಮಣ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248